ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 65 ಬಿಎಲ್‌ಡಿ 2014 / 593
ಅಡಕ:

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:12-06-2017.

ಇವರಿಗೆ,

ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಕರ್ನಾಟಕ ಸರ್ಕಾರ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು - 560 001.

ಮಾನ್ಯರೆ,

ವಿಷಯ: ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಅನಾಹುತ ಹಾಗೂ ಅಗ್ನಿ ದುರಂತ ಕುರಿತು ತರಬೇತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಪತ್ರ ಸಂಖ್ಯೆ: ಇಡಿ 204 ಯುಜಿಹೆಚ್ 2016 ದಿನಾಂಕ: 05-12-2016.
2. ಈ ಪತ್ರ ಸಂಖ್ಯೆ: ಡಿಟಿಇ 65 ಬಿಎಲ್‌ಡಿ 2017 ದಿನಾಂಕ: 21-01-2017.

ಉಲ್ಲೇಖ (1)ರ ಪತ್ರದಲ್ಲಿ ಸರ್ಕಾರವು, ಸರ್ಕಾರದ ಮುಖ್ಯ ಕಾರ್ಯದರ್ಶಿ, (ಕರ್ನಾಟಕ ಸರ್ಕಾರ) ಇವರ ಅ.ಸ. ಪತ್ರ ಸಂಖ್ಯೆ: ಸಿಎಸ್/9654/2016 ದಿ: 14-11-2016 ಹಾಗೂ ಮಾನ್ಯ ಗೃಹ ಕಾರ್ಯದರ್ಶಿಗಳು, ಭಾರತ ಸರ್ಕಾರ ಇವರ ಅ.ಸ. ಪತ್ರ ಸಂಖ್ಯೆ: 40-36/2012-ಎನ್‌ಡಿಎಮ್-2 ದಿನಾಂಕ:28-10-2016 ಗಳನ್ನು ಲಗತ್ತಿಸಿ, ಗೃಹ ಕಾರ್ಯದರ್ಶಿಗಳು ತಿಳಿಸಿರುವ ಅಂಶಗಳ ಬಗ್ಗೆ ಸೂಕ್ತ ಕ್ರಮಗಳನ್ನು ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ಮಾಹಿತಿ ನೀಡುವುದು ಎಂದು ಸೂಚಿಸಿರುತ್ತಾರೆ. ಸದರಿ ಪತ್ರದಲ್ಲಿ ತಿಳಿಸಿರುವಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ವ್ಯಾಸಂಗ ಮಾಡಿತ್ತಿರುವ ವಿದ್ಯಾರ್ಥಿಗಳಿಗೆ ವಿಪತ್ತು ನಿರ್ವಹಣೆ, ಅಗ್ನಿ ದುರಂತದಂತಹ ತುರ್ತುಪರಿಸ್ಥಿಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅರಿವನ್ನು ಮೂಡಿಸಲು ಪ್ರದರ್ಶನಗಳನ್ನು ಮತ್ತು ಈ ಕುರಿತು ಚಿತ್ರಗಳನ್ನು ಪ್ರದರ್ಶಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿರುತ್ತಾರೆ.

ಈ ದಿಸೆಯಲ್ಲಿ ತಮ್ಮ ಗಮನಕ್ಕೆ ತರಬಯಸುವುದೇನೆಂದರೆ, ಉಲ್ಲೇಖ (2)ರ ಈ ಕಛೇರಿ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಿಪತ್ತು ನಿರ್ವಹಣೆ, ಅಗ್ನಿ ದುರಂತದಂತಹ ತುರ್ತುಪರಿಸ್ಥಿಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅರಿವನ್ನು ಮೂಡಿಸಲು ಪ್ರದರ್ಶನಗಳನ್ನು ಮತ್ತು ಈ ಕುರಿತು ಚಿತ್ರಗಳನ್ನು ಪ್ರದರ್ಶಿಸಿ, ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಬೇಕೆಂದು ಪ್ರಿನ್ಸಿಪಾಲರಿಗೆ ಸೂಚಿಸಲಾಗಿದೆ ಎಂಬ ಅಂಶವನ್ನು ತಮ್ಮ ಅವಗಾಹನೆಗೆ ತರಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001.

ಪ್ರತಿ ಇವರಿಗೆ :

1. ಶ್ರೀ.ಕೆ.ಶಿವಲಿಂಗಯ್ಯ, ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001 ಇವರ ಮಾಹಿತಿಗಾಗಿ.

2. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು ಇವರ ಮಾಹಿತಿಗಾಗಿ.
3. ಇ-ಆಡಳಿತ ವಿಭಾಗಕ್ಕೆ, ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು.